**Akashvani : Bangalore**
**National Bulletin In Kannada**
**11.01.2025 / 19.35 hrs**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**11.01.2025 / 19.35 hrs**

**<><*<><>*><>**

<u>ಮುಖ್ಯಾಂಶಗಳು</u>

೧. **ಸಂಶೋಧನೆ, ಅಭಿವೃದ್ಧಿ ಮತ್ತು ನಾವೀನ್ಯತೆ ಯಶಸ್ಸಿನ ಮೂಲಮಂತ್ರ- ಉಪರಾಷ್ಟ್ರಪತಿ ಜಗದೀಪ್ ಧನಕರ್**

೨. **'ವಿಕಸಿತ ಭಾರತ ಯುವ ಧುರೀಣರ' ಸಂವಾದ; ಯುವಜನತೆಯನ್ನು ದೇಶದ ಅಭಿವೃದ್ಧಿಯ ಪಯಣದಲ್ಲಿ ತೊಡಗಿಸಿಕೊಳ್ಳುವ ವಿಶಿಷ್ಟ ಉಪಕ್ರಮ- ಪ್ರಧಾನಮಂತ್ರಿ ನರೇಂದ್ರ ಮೋದಿ**

೩. **ಮಾದಕ ದ್ರವ್ಯ ಪಿಡುಗು ನಿವಾರಣೆಗೆ ಕೇಂದ್ರ ಹಾಗೂ ರಾಜ್ಯ ಸರ್ಕಾರಗಳು ಒಟ್ಟಾಗಿ ಕೆಲಸ ಮಾಡುವುದು ಅವಶ್ಯಕ - ಕೇಂದ್ರ ಗೃಹ ಸಚಿವ ಅಮಿತ್ ಶಾ**

೪. **ಬಿಗ್ ಡಾಟಾ ಮತ್ತು ಡಾಟಾ ಸೈನ್ಸ್ ಕ್ಷೇತ್ರಕ್ಕೆ ಸಂಬಂಧಿಸಿದ ವಿಶ್ವಸಂಸ್ಥೆಯ ತಜ್ಞರ ಸಮಿತಿಗೆ ಭಾರತದ ಸೇರ್ಪಡೆ**

**<><*<><>*><>**

ಸಂಶೋಧನೆ, ಅಭಿವೃದ್ಧಿ ಮತ್ತು ನಾವೀನ್ಯತೆ ಯಶಸ್ಸಿನ ಮೂಲಮಂತ್ರಗಳಾಗಿರಬೇಕು ಎಂದು ಉಪರಾಷ್ಟ್ರಪತಿ ಜಗದೀಪ್ ಧನಕರ್ ತಿಳಿಸಿದ್ದಾರೆ. ಅವರು, ಬೆಂಗಳೂರಿನಲ್ಲಿಂದು ಭಾರತ್ ಹೆವಿ ಎಲೆಕ್ಟ್ರಿಕಲ್ಸ್ ಲಿಮಿಟೆಡ್-ಬಿಎಚ್ಇಎಲ್ ನಲ್ಲಿ ಮಾತನಾಡಿ, ದೇಶದ ಪ್ರಗತಿಯು ಕಳೆದ ೧೦ ವರ್ಷಗಳಲ್ಲಿ ಅದ್ಭುತ ಪ್ರಗತಿ ಕಂಡಿದೆ ಎಂದು ಹೇಳಿದರು.

ಧ್ವನಿ: ಉಪರಾಷ್ಟ್ರಪತಿ

ಉಪರಾಷ್ಟ್ರಪತಿ ಜಗದೀಪ್ ಧನಕರ್, ಬಿಎಚ್ಇಎಲ್ ಎಲೆಕ್ಟ್ರಾನಿಕ್ಸ್ ವಿಭಾಗದಲ್ಲಿ ಅತ್ಯಾಧುನಿಕ ಮೇಲ್ಮೈ ಆರೋಹಣ ತಂತ್ರಜ್ಞಾನ ವಿಭಾಗಕ್ಕೆ ಭೇಟಿ ಪರಿಶೀಲನೆ ನಡೆಸಿದರು. ಈ ಸಂದರ್ಭದಲ್ಲಿ ಕೇಂದ್ರ ಸಚಿವ ಕುಮಾರಸ್ವಾಮಿ ಉಪಸ್ಥಿತರಿದ್ದರು. ಇದಕ್ಕೂ ಮುನ್ನ 'ಭಾರತ್ ಎಲೆಕ್ಟ್ರಾನಿಕ್ಸ್ ಲಿಮಿಟೆಡ್-ಬಿಇಎಲ್' ನಲ್ಲಿ ಸಂಶೋಧನೆ ಮತ್ತು ಅಭಿವೃದ್ಧಿ ಪ್ರಶಸ್ತಿ ಪ್ರದಾನ ಸಮಾರಂಭದ ಅಧ್ಯಕ್ಷತೆ ವಹಿಸಿ ಮಾತನಾಡಿದ ಜಗದೀಪ್ ಧನ್‌ಕರ್ ಜಗತ್ತು ನಮ್ಮ ಸಂಶೋಧನೆ ಮತ್ತು ಅಭಿವೃದ್ಧಿ ನೋಡಿ ನಿಬ್ಬೆರಗಾದಾಗ ಮಾತ್ರ ಆತ್ಮನಿರ್ಭರವಾಗಲು ಸಾಧ್ಯ ಎಂದು ಹೇಳಿದರು.

ಧ್ವನಿ: ಉಪರಾಷ್ಟ್ರಪತಿ

ನಮ್ಮ ಗುರಿಯಂತೆ ನೂರಕ್ಕೆ ನೂರರಷ್ಟು ಸ್ವದೇಶೀಕರಣವಾಗಬೇಕು. ನಟ್ ಮತ್ತು ಬೋಲ್ಟ್‌ಗಳ ಸ್ವದೇಶೀಕರಣದಿಂದ ತೃಪ್ತರಾಗದೇ, ಸಂಶೋಧನೆ ಮತ್ತು ಅಭಿವೃದ್ಧಿಯಿಂದ ಮುನ್ನಡೆದಾಗ ಮಾತ್ರ ನಾವು ಆರ್ಥಿಕ ಶಕ್ತಿಯಾಗಿ ಹೊರಹೊಮ್ಮಲು ಸಾಧ್ಯ ಎಂದು ಅವರು ಅಭಿಪ್ರಾಯಪಟ್ಟರು.

<><*<><>*><>

'ವಿಕಸಿತ ಭಾರತ ಯುವ ಧುರೀಣರ' ಸಂವಾದವು ಯುವಜನತೆಯನ್ನು ದೇಶದ ಅಭಿವೃದ್ಧಿಯ ಪಯಣದಲ್ಲಿ ತೊಡಗಿಸಿಕೊಳ್ಳುವ ವಿಶಿಷ್ಟ ಉಪಕ್ರಮವಾಗಿದೆ ಎಂದು ಪ್ರಧಾನಮಂತ್ರಿ ನರೇಂದ್ರ ಮೋದಿ ಹೇಳಿದ್ದಾರೆ. 'ರಾಷ್ಟ್ರೀಯ ಯುವಜನೋತ್ಸವ-೨೦೨೫' ಮತ್ತು 'ವಿಕಸಿತ ಭಾರತ ಯಂಗ್ ಲೀಡರ್ಸ್ ಡೈಲಾಗ್' ಕುರಿತಂತೆ ಕೇಂದ್ರ ಯುವಜನ ಮತ್ತು ಕ್ರೀಡಾ ಖಾತೆ ರಾಜ್ಯ ಸಚಿವ ರಕ್ಷಾ ಖಡ್ಸೆ ಬರೆದಿರುವ ಲೇಖನವನ್ನು ಪ್ರಧಾನಿಯವರು ಹಂಚಿಕೊಂಡು ಈ ವಿಷಯ ತಿಳಿಸಿದ್ದಾರೆ. ವಿಕಸಿತ ಭಾರತದ ಆಶಯಗಳನ್ನು ಸಾಕಾರಗೊಳಿಸಲು ಯುವ ಮನಸ್ಸುಗಳ ಶಕ್ತಿ, ಸೃಜನಶೀಲತೆ ಮತ್ತು ನಾಯಕತ್ವಗಳಿಗೆ ರೂಪು ನೀಡುವುದು ಈ ಉಪಕ್ರಮದ ಉದ್ದೇಶವಾಗಿದೆ. ನವದೆಹಲಿಯ ಭಾರತ ಮಂಟಪಮ್‌ನಲ್ಲಿ ನಡೆದಿರುವ 'ವಿಕಸಿತ ಭಾರತ ಯಂಗ್ ಲೀಡರ್ಸ್ ಡೈಲಾಗ್' ಕಾರ್ಯಕ್ರಮದ ಮೊದಲ ದಿನವಾದ ಇಂದು ಮನ್ಸೂಖ್ ಮಾಂಡವೀಯ ಮಾತನಾಡಿ, ಪ್ರಧಾನಮಂತ್ರಿಯವರು ಸ್ವಾತಂತ್ರ್ಯ ದಿನದ ಭಾಷಣದಲ್ಲಿ ರಾಜಕೀಯ ಇತಿಹಾಸವಿರದ ೧ ಲಕ್ಷ ಯುವಜನತೆ ರಾಜಕೀಯಕ್ಕೆ ಬರಬೇಕು ಎಂದು ಕರೆಕೊಟ್ಟಿದ್ದು, ಈ ನಿಟ್ಟಿನಲ್ಲಿ ಈ ಕಾರ್ಯಕ್ರಮ ಪ್ರಮುಖವೆನಿಸಿದೆ ಎಂದರು. ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು, ನಾಳೆ ರಾಷ್ಟ್ರೀಯ ಯುವದಿನದ ಸಂದರ್ಭದಲ್ಲಿ ಸುಮಾರು ೩ ಸಾವಿರ ಯುವಧುರೀಣರ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಸಂವಾದ ನಡೆಸಲಿದ್ದಾರೆ.

<><*<><>*><>

ಸಿಂಗಾಪುರದ ಅಧ್ಯಕ್ಷ ಥರ್ಮನ್ ಷಣ್ಮುಗ ರತ್ನಮ್, ಇದೇ ಮಂಗಳವಾರದಿಂದ ಭಾರತಕ್ಕೆ ಐದು ದಿನಗಳ ಭೇಟಿ ನೀಡಲಿದ್ದಾರೆ. ಸಿಂಗಾಪುರದ ಅಧ್ಯಕ್ಷರೊಬ್ಬರು ಕಳೆದ ಹತ್ತು ವರ್ಷಗಳಲ್ಲಿ ನೀಡುತ್ತಿರುವ ಮೊದಲ ಅಧಿಕೃತ ಭೇಟಿ ಇದಾಗಿದೆ. ಭಾರತ-ಸಿಂಗಾಪುರ ನಡುವಿನ ೬೦ ವರ್ಷಗಳ ರಾಜತಾಂತ್ರಿಕ ಸಂಬಂಧಗಳ ದ್ಯೋತಕವಾಗಿ ಷಣ್ಮುಗ ರತ್ನಮ್ ಈ ಭೇಟಿ ನೀಡುತ್ತಿದ್ದಾರೆ. ಅವರು ತಮ್ಮ ಪ್ರವಾಸದ ಸಂದರ್ಭದಲ್ಲಿ ರಾಷ್ಟ್ರಪತಿ ದ್ರೌಪದಿ ಮುರ್ಮು ಹಾಗೂ ಪ್ರಧಾನಿ ನರೇಂದ್ರ ಮೋದಿ ಅವರನ್ನು ಭೇಟಿ ಮಾಡಿ ಮಾತುಕತೆ ನಡೆಸಲಿದ್ದಾರೆ.

<><*<><>*><>

ಉತ್ತರಪ್ರದೇಶದ ಪ್ರಯಾಗ್‌ರಾಜ್‌ನಲ್ಲಿ ಮಹಾಕುಂಭ ಮೇಳ ಇದೇ ಸೋಮವಾರ ಅಮೃತ ಸ್ನಾನದೊಂದಿಗೆ ಆರಂಭವಾಗಲಿದೆ. ೪೫ ದಿನಗಳ ಕಾಲ ನಡೆಯಲಿರುವ ಮಹಾಕುಂಭ ಮೇಳದಲ್ಲಿ ಲಕ್ಷಾಂತರ ಯಾತ್ರಿಕರು ಭಾಗವಹಿಸುತಿದ್ದು, ಇದಕ್ಕಾಗಿ ವ್ಯಾಪಕ ರಕ್ಷಣೆ, ಆರೋಗ್ಯ, ಸುರಕ್ಷತಾ ಕ್ರಮಗಳನ್ನು ಕೈಗೊಳ್ಳಲಾಗಿದೆ.

<><*<><>*><>

ಮಾದಕ ದ್ರವ್ಯ ಪಿಡುಗು ನಿವಾರಣೆಗೆ ಕೇಂದ್ರ ಹಾಗೂ ರಾಜ್ಯ ಸರ್ಕಾರಗಳು ಒಟ್ಟಾಗಿ ಕೆಲಸ ಮಾಡುವ ಅವಶ್ಯಕತೆ ಇದೆ ಎಂದು ಕೇಂದ್ರ ಗೃಹ ಸಚಿವ ಅಮಿತ್ ಶಾ ಹೇಳಿದ್ದಾರೆ. ಅವರು ನವದೆಹಲಿಯಲ್ಲಿಂದು ಮಾದಕ ದ್ರವ್ಯ ಕಳ್ಳ ಸಾಗಾಟ ಮತ್ತು ರಾಷ್ಟ್ರೀಯ ಭದ್ರತೆ ಕುರಿತಾದ ಪ್ರಾದೇಶಿಕ ಸಮಾವೇಶದ ಅಧ್ಯಕ್ಷತೆ ವಹಿಸಿ ಮಾತನಾಡುತ್ತಿದ್ದರು. ಕಳೆದ ವರ್ಷ ೧೬ ಸಾವಿರದ ೯೦೦ ಕೋಟಿ ರೂಪಾಯಿಗೂ ಅಧಿಕ ಮೌಲ್ಯದ ಮಾದಕ ದ್ರವ್ಯಗಳನ್ನು ವಶಪಡಿಸಿಕೊಳ್ಳಲಾಗಿದೆ. ಇದು ಸ್ವಾತಂತ್ರ್ಯ ನಂತರದ ಅತಿ ದೊಡ್ಡ ಕಾರ್ಯಾಚರಣೆಯಾಗಿದೆ ಎಂದರು.

**ಧ್ವನಿ: ಅಮಿತ್ ಶಾ, ಕೇಂದ್ರ ಸಚಿವ**

ಸಚಿವರು ಇದೇ ಸಂದರ್ಭದಲ್ಲಿ ಮಾನಸ್-೨ ಸಹಾಯವಾಣಿ, ವಿಸ್ತರಣೆ ಉಪಕ್ರಮಕ್ಕೆ ಚಾಲನೆ ನೀಡಿದರು. ಮಾದಕ ದ್ರವ್ಯ ನಿಯಂತ್ರಣ ವಿಭಾಗದ ಭೂಪಾಲ್ ವಲಯದ ನೂತನ ಕಚೇರಿ ಸಂಕೀರ್ಣವನ್ನು ಉದ್ಘಾಟಿಸಿದರು. ಮಾದಕ ದ್ರವ್ಯ ನಾಶ ಪಾಕ್ಷಿಕ ಕಾರ್ಯಕ್ರಮಕ್ಕೂ ಸಚಿವರು ಚಾಲನೆ ನೀಡಿದರು. ಈ ಕಾರ್ಯಕ್ರಮ ಇಂದಿನಿಂದ ಆರಂಭವಾಗಿದ್ದು, ಈ ಅವಧಿಯಲ್ಲಿ ೨ ಸಾವಿರದ ೪೧೧ ಕೋಟಿ ರೂಪಾಯಿಗೂ ಅಧಿಕ ಮೌಲ್ಯದ ೪೪ ಸಾವಿರದ ೭೯೨ ಕೆಜಿ ಮಾದಕ ದ್ರವ್ಯಗಳನ್ನು ನಾಶಪಡಿಸಲಾಗುತ್ತಿದೆ. ಮಾದಕ ದ್ರವ್ಯದ ಕಳ್ಳ ಸಾಗಾಟ ಬಳಕೆ ಮತ್ತು ರಾಷ್ಟ್ರೀಯ ಭದ್ರತೆ ಮೇಲೆ ಅದರಿಂದ ಉಂಟಾಗುವ ಪರಿಣಾಮಗಳ ಹಿನ್ನೆಲೆಯಲ್ಲಿ ಕೈಗೊಳ್ಳಬೇಕಾದ ಕ್ರಮಗಳ ಕುರಿತು ಮಾದಕ ದ್ರವ್ಯ ನಿಯಂತ್ರಣ ವಿಭಾಗ ಈ ಅಧಿವೇಶನ ವ್ಯವಸ್ಥೆ ಮಾಡಿದೆ.

**<><*<><>*><>**

ಕೇಂದ್ರ ವಾರ್ತಾ ಮತ್ತು ಪ್ರಸಾರ ಖಾತೆ ಸಚಿವ ಅಶ್ವಿನಿ ವೈಷ್ಣವ್ ಅವರು, ಪುಣೆಯಲ್ಲಿಂದು ಅಡ್ವಾನ್ಸ್‌ಡ್ ಕಂಪ್ಯೂಟಿಂಗ್ ಡೆವಲೆಪ್‌ಮೆಂಟ್-ಸಿಡಿಸಿ, ಕೇಂದ್ರಕ್ಕೆ ಭೇಟಿ ನೀಡಿ 'ಸಿ-ಡಾಕ್' ಗೆ ಸಂಬಧಿಸಿದಂತೆ ನಡೆಯುತ್ತಿರುವ ಕಾರ್ಯಗಳ ಪರಿಶೀಲನೆ ನಡೆಸಿದರು. ಸೂಪರ್ ಕಂಪ್ಯೂಟರ್ ತಂತ್ರಜ್ಞಾನಕ್ಕೆ ಅಗತ್ಯವಿರುವ ಚಿಪ್‌ಗಳು ಹಾಗೂ ತಾಂತ್ರಿಕ ಉಪಕರಣಗಳ ಅಭಿವೃದ್ಧಿ ಹಾಗೂ ಇತರ ಉದ್ದಿಮೆಗಳಿಗೆ ನೆರವಾಗುವ ವಿದ್ಯುನ್ಮಾನ ಉಪಕರಣಗಳ ಅಭಿವೃದ್ಧಿ ಕುರಿತಂತೆ ನಡೆದಿರುವ ಕಾರ್ಯಗಳನ್ನು ಸಚಿವರು ವೀಕ್ಷಿಸಿದರು. ಸಿ-ಡಾಕ್ ಮತ್ತು ನೋವಾ ಡೆವಲಪ್‌ಮೆಂಟ್ ಬೋರ್ಡ್ ಅಭಿವೃದ್ಧಿಪಡಿಸಿರುವ ತೇಜ್ ಜಸ್-೬೪ ಚಿಪ್ ಅನ್ನು ಸಚಿವರು ಉದ್ಘಾಟನೆಗೊಳಿಸಿದರು. ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಸಚಿವ ಅಶ್ವಿನಿ ವೈಷ್ಣವ್ ಎಲೆಕ್ಟ್ರಾನಿಕ್ ಕಂಪನಿಗಳಿಗೆ ಅವಶ್ಯಕವಿರುವ ಚಿಪ್ ಹಾಗೂ ಸೆಮಿಕಂಡಕ್ಟರ್‌ಗಳನ್ನು ಅಭಿವೃದ್ಧಿಪಡಿಸಲು ರಂಜನ್‌ಗಾಂನಲ್ಲಿ ಎಲೆಕ್ಟ್ರಾನಿಕ್ ಕ್ಲಸ್ಟರ್ ಸ್ಥಾಪಿಸಲಾಗುವುದು ಎಂದರು. ಸಚಿವರು, ಪುಣೆಯ ಚಲನಚಿತ್ರ ಹಾಗೂ ಟೆಲಿವಿಜನ್ ಸಂಸ್ಥೆಗೂ ಭೇಟಿ ನೀಡಿ ವಿದ್ಯಾರ್ಥಿಗಳೊಂದಿಗೆ ಸಂವಾದ ನಡೆಸಿದರು. ಸಂಸ್ಥೆಯ ಆವರಣದಲ್ಲಿ ನಿರ್ಮಿಸಲಾದ ಸಭಾಂಗಣವನ್ನು ಈ ಸಂದರ್ಭದಲ್ಲಿ ಉದ್ಘಾಟಿಸಿದರು.

**<><*<><>*><>**

ಬಿಗ್ ಡಾಟಾ ಮತ್ತು ಡಾಟಾ ಸೈನ್ಸ್ ಕ್ಷೇತ್ರಕ್ಕೆ ಸಂಬಂಧಿಸಿದ ವಿಶ್ವಸಂಸ್ಥೆಯ ತಜ್ಞರ ಸಮಿತಿಗೆ ಭಾರತ ಸೇರ್ಪಡೆಯಾಗಿದೆ. ವಿಶ್ವಸಂಸ್ಥೆಯ ಅಧಿಕೃತ ಅಂಕಿ-ಅಂಶಗಳು ಉದ್ದೇಶಕ್ಕಾಗಿ ರಚಿಸಲಾಗಿರುವ ಈ ಸಮಿತಿ ಜಾಗತಿಕ ಗುಣಮಟ್ಟ ಹಾಗೂ ಅಭ್ಯಾಸ ಕುರಿತ ಕ್ಷೇತ್ರಗಳಿಗೆ ತನ್ನ ಕೊಡುಗೆಯನ್ನು ನೀಡಲಿದೆ. ಈ ಸಮಿತಿಗೆ ಭಾರತ ಸೇರ್ಪಡೆಯಾಗಿರುವುದು ದೇಶದ ಅಂಕಿ-ಅಂಶ ಪರಿಸರದ ದೃಷ್ಟಿಯಿಂದ ಮಹತ್ವದ ಮೈಲಿಗಲ್ಲಾಗಿದೆ ಎಂದು ಅಂಕಿ-ಅಂಶ ಸಚಿವಾಲಯ ತಿಳಿಸಿದೆ.

**<><*<><>*><>**

ಅಯೋಧ್ಯೆಯ ಶ್ರೀರಾಮ ಜನ್ಮಭೂಮಿ ಮಂದಿರದಲ್ಲಿ ರಾಮಲಲ್ಲಾ ಪ್ರತಿಷ್ಠಾಪನೆಯ ಮೊದಲ ವಾರ್ಷಿಕ ಉತ್ಸವ ಇಂದು ಆರಂಭವಾಯಿತು. ಮೂರು ದಿನಗಳ ಕಾಲ ನಡೆಯುತ್ತಿರುವ ಪ್ರತಿಷ್ಠಾ ದ್ವಾದಶಿ ಉತ್ಸವದಲ್ಲಿ ಲಕ್ಷಾಂತರ ಶ್ರದ್ಧಾಳುಗಳು ಪಾಲ್ಗೊಂಡು ರಾಮಲಲ್ಲಾ ದರ್ಶನ ಪಡೆದರು.

**<><*<><>*><>**

ಅಸ್ಸಾಂನ ಉಮ್ರಾಂಗ್ಸೊ ಗಣಿಯಿಂದ ಮೂರು ದೇಹಗಳನ್ನು ಇಂದು ಹೊರತೆಗೆಯಲಾಗಿದ್ದು, ರಕ್ಷಣಾ ಕಾರ್ಯ ಮುಂದುವರೆದಿದೆ. ನೌಕಾದಳ, ಸೇನಾಪಡೆ, ಎನ್‌ಡಿಆರ್‌ಎಫ್, ಎಸ್‌ಡಿಆರ್‌ಎಫ್, ಒಎನ್‌ಜಿಸಿ,

ಕೋಲ್ ಇಂಡಿಯಾ ಮತ್ತು ಜಿಲ್ಲಾ ಆಡಳಿತದ ಪಡೆಗಳು ಕಾಣೆಯಾಗಿರುವ ಇನ್ನೂ ಐವರು ರ್‍ಯಾಟ್‌ಹೋಲ್ ಕೋಲ್ ಮೈನರ್ಸ್‌ಗಳಿಗಾಗಿ ಶೋಧಕಾರ್ಯ ಮುಂದುವರಿಸಿದ್ದಾರೆ. ಸೋಮವಾರ ಬೆಳಗ್ಗೆ ಈ ಗಣಿ ಪ್ರದೇಶದಲ್ಲಿ ಕ್ಷಿಪ್ರ ನೀರಿನ ಪ್ರವಾಹ ಸಂಭವಿಸಿ ಕಾರ್ಮಿಕರು ಗಣಿ ಒಳಗಡೆ ಸಿಲುಕಿಕೊಂಡಿದ್ದಾರೆ.

**<><*<><>*><>**

ಕೌಲಾಂಪುರದಲ್ಲಿ ನಡೆದಿರುವ ಮಲೇಷಿಯಾ ಮುಕ್ತ ಬ್ಯಾಡ್ಮಿಂಟನ್ ಪಂದ್ಯಾವಳಿಯಿಂದ ಭಾರತ ಸಾತ್ವಿಕ್ ಸಾಯಿರಾಜ್ ರಾಂಕಿ ರೆಡ್ಡಿ ಮತ್ತು ಚಿರಾಗ್ ಶೆಟ್ಟಿ ಜೋಡಿ ಹೊರಬಿದ್ದಿದೆ. ಇಂದು ನಡೆದ ಸೆಮಿಫೈನಲ್ ಪಂದ್ಯದಲ್ಲಿ ಈ ಜೋಡಿ, ದಕ್ಷಿಣ ಕೊರಿಯಾದ ಸಿಯೊ-ಸಿಯೋಂಗ್-ಜೇ ಮತ್ತು ಕಿಮ್-ವನ್-ಓ ಜೋಡಿಯಿಂದ ೧೦-೨೧, ೧೫-೨೧ ಅಂತರದಿಂದ ಪರಾಭವಗೊಂಡಿತು.

**<><*<> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <>*><>**

**<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ನಾಳೆ ಬೆಳಗ್ಗೆ ೭.೦೫ ಕ್ಕೆ <>*><>**